



ಅರುಣ ಪಿ. ಭಟ್ಟ

## ವಾರಭವಿಷ್ಯ: 13.10.2022ರಿಂದ 19.10.2022ರವರೆಗೆ




ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುವುದಕ್ಕೆ ವಾರದ ಶುರುವಿನಲ್ಲಿ ಸಿದ್ಧರಾಗುತ್ತೀರಿ. ಕೆಲವು ವಿಚಾರಗಳು ಕಣ್ತಪ್ಪಿನಿಂದ ಬಿಟ್ಟು ಹೋಗುವ ಸಾಧ್ಯತೆ ಇದೆ. ಇದರಿಂದ ಹಿರಿಯ ಅಧಿಕಾರಿಗಳು ಬೇಸರಿಸಿಕೊಳ್ಳುತ್ತಾರೆ. ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ಶುಭದಿನ **14.** ಶ್ರೀ ದುರ್ಗಾಪಾರಾಯಣ ಮಾಡಿರಿ.




ವಾರದ ಶುರುವಿನಲ್ಲಿ ವ್ಯಾಪಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳ ಪರಾಮರ್ಶೆಗೆ ಹೆಚ್ಚು ಸಮಯವನ್ನು ಮೀಸಲಿಡಲಿದ್ದೀರಿ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಆಹಾರ ನೀರಿನ ಸೇವನೆಯಲ್ಲಿ ಬಹಳ ಎಚ್ಚರಿಕೆಯಿಂದ ಇರಬೇಕು. ಉದ್ಯೋಗ ಸ್ಥಳದಲ್ಲಿ ಒತ್ತಡದ ಸನ್ನಿವೇಶ ಎದುರಾಗಲಿದ್ದು, ಅದರ ಪ್ರಭಾವ ಆರೋಗ್ಯದ ಮೇಲೂ ಆಗಲಿದೆ. ಶುಭದಿನ **18.** ವಿಷ್ಣು ಸಹಸ್ರನಾಮ ಪಠಿಸಿರಿ.




ಈ ಅವಧಿಯಲ್ಲಿ ನೀವು ಹಾಕುವ ಶ್ರಮಕ್ಕೆ ಅದ್ಭುತವಾದ ಯಶಸ್ಸು ದೊರೆಯಲಿದೆ. ಭೂಮಿ ವ್ಯವಹಾರದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಹಲವು ಕ್ಷೇತ್ರಗಳಲ್ಲಿ ಸಕಾರಾತ್ಮಕ ಫಲಿತಾಂಶ ಪಡೆಯಲಿದ್ದೀರಿ. ಉನ್ನತ ಶಿಕ್ಷಣದಲ್ಲೂ ಉತ್ತಮ ಬೆಳವಣಿಗೆ ಇದೆ. ಹಲವು ಬಗೆಯಲ್ಲಿ ನಿಮ್ಮ ಬೆಳವಣಿಗೆ ಆಗಲಿದೆ. ಶುಭದಿನ **19.** ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಲ್ಲಿ ವೈಯಕ್ತಿಕ ಹಾಗೂ ವೃತ್ತಿಪರ ಜೀವನದಲ್ಲಿ ಕೆಲವು ಬಿಕ್ಕಟ್ಟು ಎದುರಾಗುತ್ತವೆ. ಕೌಟುಂಬಿಕವಾಗಿ ಸಂತೋಷ ಸಮಾಧಾನ ಇರುತ್ತದೆ. ವಾರದ ಅಂತ್ಯಕ್ಕೆ ವೈಯಕ್ತಿಕ ಸಂಬಂಧ ಮತ್ತು ಆರೋಗ್ಯ ಅತ್ಯುತ್ತಮವಾಗುತ್ತದೆ. ಸಂಬಂಧಗಳು ಸಾಮಾನ್ಯವಾಗಿ ಕಾಣಲು ಆರಂಭಿಸುತ್ತದೆ. ಉದ್ಯೋಗ ಸ್ಥಳದಲ್ಲಿ ಹಿರಿಯ ಅಧಿಕಾರಿಗಳಿಂದ ಸಮಸ್ಯೆ ಎದುರಾಗುತ್ತದೆ. ಶುಭದಿನ **15.** ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ವಾರದ ಆರಂಭವು ಬಹಳ ಸಂತೋಷವಾಗಿರುತ್ತದೆ. ಒಂದು ಕಡೆ ಆದಾಯ ಹೆಚ್ಚಿಸಿಕೊಳ್ಳುವುದಕ್ಕೆ ಉತ್ತಮ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯದಲ್ಲೇಲಿ ಸರಿಯಾದ ಸಮಯದಲ್ಲಿ ಒಳ್ಳೆಯ ತೀರ್ಮಾನ ಕೈಗೊಳ್ಳುತ್ತೀರಿ. ಇದರಿಂದ ನಿಮ್ಮ ಆತ್ಮವಿಶ್ವಾಸ ಮತ್ತಷ್ಟು ಹೆಚ್ಚಾಗಲಿದೆ. ನಿದ್ರೆಯ ವಿಚಾರದಲ್ಲಿ ತೊಂದರೆ ಎದುರಾಗಲಿದೆ. ಆರೋಗ್ಯ ಕೈ ಕೊಡಲಿದೆ. ಶುಭದಿನ **13.** ಸೌಂದರ್ಯಲಹರಿ ಪಠಿಸಿರಿ.




ವ್ಯಾಪಾರ ವ್ಯವಹಾರ ಮಾಡುತ್ತಿರುವವರು ಅದರ ಉನ್ನತಿಗೆ ಹೆಚ್ಚು ಶ್ರಮ ಹಾಕಲಿದ್ದೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ದೊರೆಯಲಿದೆ. ಈ ಅವಧಿಯಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಗ್ರಹಗತಿಗಳು ಶುಭ ದೃಷ್ಟಿ ಬೀರುವ ಸಮಯ ಇದು. ಆರೋಗ್ಯ ಅತ್ಯುತ್ತಮವಾಗಿರುತ್ತದೆ. ಜತೆಗೆ ಈಗಾಗಲೇ ಸಾಲ ನೀಡಿದ್ದರೆ ಅದರ ವಸೂಲಿ ಆಗುತ್ತದೆ. ಶುಭದಿನ **18.** ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಮಾಧ್ಯಮ ಕ್ಷೇತ್ರದಲ್ಲಿದ್ದವರಿಗೆ ಯಶಸ್ಸು ದೊರೆಯುತ್ತದೆ. ಈ ಅವಧಿಯಲ್ಲಿ ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ಉಸಿರಾಟದ ಸಮಸ್ಯೆ ನಿಮ್ಮನ್ನು ಕಾಡಬಹುದು. ದೈನಂದಿನ ಕೆಲಸ ಕಾರ್ಯಗಳಲ್ಲಿ ಏರುಪೇರಾಗುವುದರಿಂದ ಕೆಲವರಿಗೆ ರಕ್ತಕ್ಕೆ ಸಂಬಂಧಿಸಿದ ದೋಷಗಳು ಕಾಡಬಹುದು, ಎಚ್ಚರಿಕೆ ಇರಲಿ. ಶುಭದಿನ **19.** ನವಗ್ರಹ ಸ್ತೋತ್ರ ಪಠಿಸಿರಿ.




ಸಾಮಾಜಿಕ ರಾಜಕೀಯ ಜೀವನದಲ್ಲಿ ನಿಮ್ಮ ಪ್ರಭಾವ ಅಷ್ಟಾಗಿ ಕೆಲಸಕ್ಕೆ ಬರುತ್ತಿಲ್ಲ ಎಂಬ ಆತಂಕ ಎದುರಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಪರಸ್ಪರ ನಿಂದನೆಗಳನ್ನು ಮಾಡುವ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಬಿಡುವಿಲ್ಲದೆ ತೊಡಗಿಸಿಕೊಳ್ಳುತ್ತೀರಿ. ಆರೋಗ್ಯ ಉತ್ತಮವಾಗಿದ್ದು, ಸಂತೋಷವಾಗಿ ಇರುತ್ತೀರಿ. ಶುಭದಿನ **14.** ಶನಿ ಸ್ತೋತ್ರ ಪಠಣ ಮಾಡಿರಿ.




ಸಾರ್ವಜನಿಕ ಸಂಪರ್ಕ ಹೆಚ್ಚು ಮಾಡಿಕೊಳ್ಳಲು ಹೆಚ್ಚು ಶ್ರಮ ಹಾಕುತ್ತೀರಿ. ಉದ್ಯಮ ನಡೆಸುತ್ತಿರುವವರು ಈಗ ನೀಡುತ್ತಿರುವ ಸೇವೆಗಳ ಜತೆಗೆ ಇನ್ನಷ್ಟು ಸೇರ್ಪಡೆ ಮಾಡಲಿದ್ದೀರಿ. ಆರೋಗ್ಯ ಚೆನ್ನಾಗಿದೆ ಎಂದು ನಿಮಗೇ ಅನಿಸುತ್ತದೆ. ಬಿಡುವಿಲ್ಲದ ಉದ್ಯೋಗದ ಮಧ್ಯೆಯೂ ಕುಟುಂಬ ಜೀವನಕ್ಕೆ ಹೆಚ್ಚಿನ ಸಮಯವನ್ನು ಇಡಬೇಕಾಗುತ್ತದೆ. ಶುಭದಿನ **13.** ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ವಾರದ ಆರಂಭದಲ್ಲಿ ವ್ಯಾಪಾರದ ಬಗ್ಗೆ ಗಮನ ಹೆಚ್ಚು ನೀಡಬೇಕಾಗುತ್ತದೆ. ನಿಮ್ಮ ಜೊತೆ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡುತ್ತೀರಿ. ಇನ್ನು ಉತ್ಪಾದನೆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಣಕಾಸಿನ ಕೊರತೆ ಹಾಗೂ ಕಚ್ಚಾ ವಸ್ತುಗಳ ಕೊರತೆ ಕಾಡಲಿದೆ. ಸಂಗಾತಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವಾರದ ಅಂತ್ಯಕ್ಕೆ ಅನಾರೋಗ್ಯ ಕಾಡಬಹುದು. ಶುಭದಿನ **17.** ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಲ್ಲಿ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಸಾಧ್ಯತೆಗಳಿವೆ. ಆರೋಗ್ಯ ಸುಧಾರಿಸುತ್ತದೆ. ಶುಭದಿನ **18.** ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಆರೋಗ್ಯ ಉತ್ತಮವಾಗಿರುತ್ತದೆ. ವೈಯಕ್ತಿಕ ಹಾಗೂ ಕೌಟುಂಬಿಕ ಜೀವನ ಸುಖವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಪ್ರೇಮಿಗಳಿಗೆ ಪ್ರೇಮ ನಿವೇದನೆ ಮಾಡಿಕೊಳ್ಳುವ ಸಾಧ್ಯತೆ ಹೆಚ್ಚಾಗಿದೆ. ನಿಮ್ಮ ಮನಸಿಗೆ ನೆಚ್ಚಿದವರ ಎದುರು ಪ್ರೀತಿಯನ್ನು ಹೇಳಿಕೊಳ್ಳಲಿದ್ದೀರಿ. ಈ ಅವಧಿಯಲ್ಲಿ ಹಣಕಾಸಿನ ಹರಿವು ಉತ್ತಮವಾಗಿ ಇರಲಿದೆ. ಶುಭದಿನ **18.** ಚಂಡಿ ಪಾರಾಯಣ ಮಾಡಿರಿ.